ಇ) ಹಾಗಿದ್ದಲ್ಲಿ ಈ ಪ್ರಸ್ತಾವನೆ ಬಗೆಗೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು)

ಅ) ಹೌದು. ಬಂದಿದೆ.

ಆ) ಹೌದು.

ಇ) ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಜಿಲ್ಲಾ ಆಸ್ಪತ್ರೆ ಮಂಡ್ಯ ಇಲ್ಲಿನ ಸುಧಾರಣೆ

2727 (3250) ಶ್ರೀ ಆತ್ಮಾನಂದ. ಎಂ. ಎಸ್. (ಮಂಡ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಜಿಲ್ಲಾ ಆಸ್ಪತ್ರೆ, ಮಂಡ್ಯ ಇಲ್ಲಿನ ಅವ್ಯವಸ್ಥೆಯು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿ ಸುಧಾರಣೆಯನ್ನು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಡಾ॥ ಎ. ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಕೆಲವು ದೂರನ್ನು ಸ್ವೀಕರಿಸಲಾಗಿದೆ.

ಆ) ಜಿಲ್ಲಾ ಶಸ್ತ್ರ ಚಿಕಿತ್ಸಕರ ಹುದ್ದೆಯನ್ನು ಇತ್ತೀಚೆಗೆ ಭರ್ತಿ ಮಾಡಲಾಗಿದೆ. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರನ್ನು ಆಸ್ಪತ್ರೆಗೆ ಭೇಟಿ ನೀಡಿ ಸದರಿ ಜಿಲ್ಲಾ ಆಸ್ಪತ್ರೆಗೆ ಸುಧಾರಣೆಯ ಬಗ್ಗೆ ಸೂಕ್ತ ಸಲಹೆ ನೀಡಲು ನಿರ್ದೇಶಿಸಲಾಗಿದೆ. ಜಿಲ್ಲಾ ಆಸ್ಪತ್ರೆ, ಮಂಡ್ಯ ಇಲ್ಲಿನ ಸಂದರ್ಶಕರ ಸಮಿತಿಯನ್ನು ಪುನರ್ ರಚಿಸಲು ಕ್ರಮ ಕೈಗೊಳ್ಳಲಾಗುವುದು.

ಮಂಡ್ಯ ನಗರದ ಆಯುರ್ವೇದ ಆಸ್ಪತ್ರೆಯ ಕಟ್ಟಡ ಕುರಿತು

2728 (3251) ಶ್ರೀ ಆತ್ಮಾನಂದ. ಎಂ. ಎಸ್ (ಮಂಡ್ಯ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರದಲ್ಲಿ ಆಯುರ್ವೇದ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದೆಯೇ ?

ಆ) ಹಾಗಿದ್ದಲ್ಲಿ ಈ ಆಸ್ಪತ್ರೆಗೆ ಸೂಕ್ತ ಕಟ್ಟಡವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ಸದರಿ ಆಸ್ಪತ್ರೆಗೆ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಡಾ॥ ಎ. ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ಹೌದು.